# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 435 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 10.03.2025 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಅನ್ನಭಾಗ್ಯ ಯೋಜನೆ ಅಡಿಯಲ್ಲಿ ಅರ್ಹ ಬಡ ಕುಟುಂಬಗಳಿಗೆ ಪೂರೈಸಲಾಗುವ ಆಹಾರ ಧಾನ್ಯಗಳನ್ನು ಅಕ್ರಮವಾಗಿ ಬೇರೆ ರಾಜ್ಯಗಳಿಗೆ ಹಾಗೂ ಕಾಳ ಸಂತೆಗಳಲ್ಲಿ ಸರಬರಾಜುವಾಗುವ ದಿಶೆಯಲ್ಲಿ ಜಾಗೃತ ದಳಗಳು ಅಂತಹವರ ವಿರುದ್ಧ ಅನೇಕ ದೂರು ದಾಖಲು ಮಾಡುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ರಾಜ್ಯದ ಮಟ್ಟದ ಆಹಾರ ಜಾಗೃತಿ ಮತ್ತು ತನಿಖಾ ದಳವು 21 ಪ್ರಕರಣಗಳನ್ನು ಪತ್ತೆ ಹಚ್ಚಿ 12,86,887 ಕ್ವಿಂಟಾಲ್ ಸಾರ್ವಜನಿಕ ಪಡಿತರ ವ್ಯವಸ್ಥೆಗೆ ಸೇರಿದ ಅಕ್ಕಿ 50.26 ಕ್ವಿಂಟಾಲ್ ಗೋಧಿ ಹಾಗೂ 507.71 ಕ್ವಿಂಟಾಲ್ ರಾಗಿಯನ್ನು ವಶಪಡಿಸಿಕೊಳ್ಳಲಾಗಿದೆ. ಸದರಿ ಆಹಾರಧಾನ್ಯಗಳ ಮೌಲ್ಯ ರೂ. 5,80,49,312 ಆಗಿರುತ್ತದೆ ಹಾಗೂ ಅಕ್ರಮ ವ್ಯವಹಾರ ನಡೆಸಿರುವ ಆರೋಪಿತರ ವಿರುದ್ಧ ಎಫ್.ಐ.ಆರ್ ದಾಖಲಿಸಲಾಗಿದೆ. 335 ಪ್ರಕರಣಗಳು ವಿಚಾರಣೆ ಹಂತದಲ್ಲಿವೆ. |
| ಆ | ಇಂತಹ ಅಕ್ರಮ ಸಾಗಾಣಿಕೆಯನ್ನು ತಡೆಗಟ್ಟಲು ಆಹಾರ ಧಾನ್ಯಗಳ ಸರಬರಾಜು ವಾಹನಗಳಿಗೆ ಜಿ.ಪಿ.ಎಸ್ (GPS) ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆಯೇ; | ಹೌದು, ಕ್ರಮವಹಿಸಲಾಗುತ್ತಿದೆ. |
| ಇ | ಸರ್ಕಾರವು ಇಂತಹ ಪ್ರಕರಣಗಳನ್ನು ತಡೆಗಟ್ಟಲು ಜಿ.ಪಿ.ಎಸ್ (GPS) ಅಳವಡಿಸುವುದಲ್ಲದೇ ಬೇರೆ ಯಾವ ಕ್ರಮ ಕೈಗೊಳ್ಳಲಾಗಿದೆ? | ಪಡಿತರ ಧಾನ್ಯಗಳು ಕಾಳಸಂತೆಯಲ್ಲಿ ಮಾರಾಟ ವಾಗುತ್ತಿರುವುದನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:-<br>• ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸಲಾಗುವ ಪಡಿತರವನ್ನು ಭಾರತ ಆಹಾರ ನಿಗಮದಿಂದ ಮತ್ತು ಸಗಟು ಮಳಿಗೆಯಿಂದ ನ್ಯಾಯಬೆಲೆ ಅಂಗಡಿಗಳಿಗೆ ಸರಬರಾಜು ಮಾಡಲು ಸಗಟು ಹಾಗೂ ಚಿಲ್ಲರೆ ಸಾಗಾಣಿಕೆ ಗುತ್ತಿಗೆ ದಾರರನ್ನು ನಿಯೋಜಿಸಲಾಗಿರುತ್ತದೆ.<br>• ಸಗಟು ಮಳಿಗೆಗಳಿಂದ ನ್ಯಾಯಬೆಲೆ ಅಂಗಡಿಗಳಿಗೆ ಸರಬರಾಜು ಮಾಡಲು ರೂಟ್ ಮ್ಯಾಪ್ ಅನ್ನು ನೀಡುವ ಪದ್ಧತಿ ಚಾಲ್ತಿಯಲ್ಲಿರುತ್ತದೆ. |

| | | |
|---|---|---|
| | | • ಸಗಟು ಮಳಿಗೆ ಮತ್ತು ನ್ಯಾಯಬೆಲೆ ಅಂಗಡಿಗಳಿಗೆ ಪಡಿತರ ಎತ್ತುವಳಿ ಮತ್ತು ವಿತರಣೆ ಸಮಯದಲ್ಲಿ ಆಹಾರ ನಿರೀಕ್ಷಕರು ಕಡ್ಡಾಯವಾಗಿ ಹಾಜರಿರಬೇಕೆಂದು ಮತ್ತು ಜಿಲ್ಲೆಯ ಜಂಟಿ/ಉಪ ನಿರ್ದೇಶಕರುಗಳು ಮೇಲ್ವಿಚಾರಣೆ ವಹಿಸುವಂತೆ ಕಡ್ಡಾಯ ಸೂಚನೆಗಳನ್ನು ನೀಡಿ ಪ್ರತಿ ಮಾಹೆಗೆ ಗುರಿ ನಿಗಧಿಪಡಿಸಲಾಗಿರುತ್ತದೆ.<br>• ಸಗಟು ಮಳಿಗೆಗಳಿಗೆ ಪೂರ್ಣ ಪ್ರಮಾಣದ ಪಡಿತರ ಸ್ವೀಕರಿಸಿರುವ ಬಗ್ಗೆ ಜಿಲ್ಲಾ ವ್ಯವಸ್ಥಾಪಕರು ಮತ್ತು ಸಗಟು ಮಳಿಗೆ ವ್ಯವಸ್ಥಾಪಕರು, ಆಹಾರ ನಿರೀಕ್ಷಕರುಗಳು ದೃಡೀಕರಿಸಿದ ನಂತರವೇ ಕಮೀಷನ್ ಮೊತ್ತವನ್ನು ಪಾವತಿಸಲು ಕ್ರಮವಹಿಸಲಾಗುತ್ತಿದೆ.<br>• ನ್ಯಾಯಬೆಲೆ ಅಂಗಡಿ ಮಟ್ಟದಲ್ಲಿ ಜಾಗೃತ ಸಮಿತಿಯನ್ನು ರಚಿಸಲಾಗಿದೆ. ವಿಶೇಷ ಬಣ್ಣದ ಅಧಿಕೃತ ವಾಹನಗಳಲ್ಲಿ ಆಹಾರಧಾನ್ಯ ಸಾಗಾಣಿಕೆ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ. |

ಇ-ಆನಾಸ **48 ಆರ್‌ಪಿಆರ್ 2025**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು